## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಪಿ.ಸಿ.ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕ್ಯಾತನಹಳ್ಳಿ, ಗ್ರಾ.ಪಂ. ಪಾಂಡವಪುರ ತಾಲ್ಲೂಕು, ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್‌ಸ್ಥಾಪಿಸುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂ.ಗ್ರಾಅಪ 229 ವಿಸೇಬಿ 2015, ದಿನಾಂಕ: 30-9-2015.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ , ಪಾಂಡವಪುರ ಇವರ ವರದಿ ದಿನಾಂಕ 14-10-2015.
ಶ್ರೀ ಪಿ.ಸಿ.ಕುಮಾರ್ ಇವರ ಮನವಿ ದಿನಾಂಕ: 13-2-2014.

****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 30-09-2015ರ ಆದೇಶದಲ್ಲಿ ಶ್ರೀ ಪಿ.ಸಿ.ಕುಮಾರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರು ಮಂಡ್ಯ ಜಿಲ್ಲೆ, ಪಾಂಡವಪುರ ತಾಲ್ಲೂಕು, ಕ್ಯಾತನಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಶ್ರೀ ಗುರುಮೂರ್ತಿ ಬಿನ್ ಶ್ರೀ ಅಂಕೇಗೌಡ, ಇವರಿಗೆ ನೀರಿನ ಸಂಪರ್ಕ ಕಲ್ಪಿಸದೆ ಉದಾಸೀನತೆ ತೋರಿರುವುದು, ಮಾನವ ಹಕ್ಕುಗಳ ಆಯೋಗವು ದಿನಾಂಕ 8-4-2015ರಂದು ನೀಡಿದ ಆದೇಶವನ್ನೂ ಸಹ ಉಲ್ಲಂಘಿಸಿರುವುದು ಇತ್ಯಾದಿ ಗಂಭೀರ ಸ್ವರೂಪದ ಕರ್ತವ್ಯ ಲೋಪವೆಸಗಿರುವುದು ಕಂಡು ಬಂದಿದ್ದು, ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ವಿಫಲರಾದ ಕಾರಣ ಸರ್ಕಾರವು ಸದರಿಯವರನ್ನು ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಗುರುಮೂರ್ತಿ ಬಿನ್ ಅಂಕೇಗೌಡ, ಕ್ಯಾತನಹಳ್ಳಿ ಗ್ರಾಮ ಪಂಚಾಯತಿ ಇವರ ವಾಣಿಜ್ಯ ಮಳಿಗೆಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಿರುವುದಾಗಿ ವರದಿ ಮಾಡಿರುತ್ತಾರೆ. ಸರ್ಕಾರದ ಗ್ರಾಮೀಣಾಭಿವೃದ್ಧಿ ಆಯುಕ್ತರು ಸಹ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ನೀರು ಸಂಪರ್ಕ ಕಲ್ಪಿಸಿರುವುದನ್ನು ಪರಿಶೀಲಿಸಿರುತ್ತಾರೆಂದು ಲೋಕಾಯುಕ್ತ ಕಚೇರಿಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿರುತ್ತಾರೆ.

ಏತನ್ಮಧ್ಯೆ ಶ್ರೀ ಪಿ.ಸಿ.ಕುಮಾರ್ ಇವರು ಸಹ ಮನವಿಯನ್ನು ಸಲ್ಲಿಸಿ, ತಮ್ಮನ್ನು ಸೇವೆಗೆ ಪುನರ್ ಸ್ಥಾಪಿಸಬೇಕೆಂದು ಕೋರಿರುತ್ತಾರೆ.

ಪು.ತಿ.ನೋ.

ಸರ್ಕಾರವು ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ, ಶ್ರೀ ಪಿ.ಸಿ.ಕುಮಾರ್, ಪಂಚಾಯತಿ ಅಭಿವೃದಿ ಅಧಿಕಾರಿ, ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು ಸೇವೆಗೆ ಪುನರ್ ಸ್ಥಾಪಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 229 ವಿಸೇಬಿ 2015 ಬೆಂಗಳೂರು ದಿನಾಂಕ: 03.03.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು **ಶ್ರೀ ಪಿ.ಸಿ.ಕುಮಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರ ವಿರುದ್ಧದ ಇಲಾಖಾ** ವಿಚಾರಣೆಯನ್ನು ಬಾಕಿಯಿಟ್ಟು, ಅಮಾನತ್ತನ್ನು ತೆರವುಗೊಳಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ, ಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇಲ್ಲಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಮುಂದುವರೆಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ
3/3/16
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ.(ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು, (ಎ&ಇ) ಕರ್ನಾಟಕ ಬೆಂಗಳೂರು.
2) ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಪಾಂಡವಪುರ.
5) ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
2) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.